ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಅತಿಥಿ ಶಿಕ್ಷಕರ ನೇಮಕಾತಿಗಿರುವ ಮಾನದಂಡ ಕುರಿತು

ಡಾ|| ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-

1458 (1753) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಅತಿಥಿ ಶಿಕ್ಷಕ/ಉಪನ್ಯಾಸಕರಾಗಿ ನೇಮಿಸಿಕೊಳ್ಳಲು ಅನುಸರಿಸುತ್ತಿರುವ ಮಾನದಂಡಗಳೇನು ; ಹಾಗೂ ಅವರಿಗೆ ನೀಡುವ ಗೌರವಧನ ಎಷ್ಟು ;

(ಆ) ಇಂತಹ ಅತಿಥಿ ಶಿಕ್ಷಕರನ್ನು ಶೈಕ್ಷಣಿಕ ವರ್ಷದ ಆರಂಭದ ದಿನದಿಂದಲೇ ನೇಮಿಸಿಕೊಳ್ಳಲು ಇರುವ ತೊಂದರೆ ಏನು ;

(ಇ) ಕಳೆದ 3 ವರ್ಷಗಳಿಂದ ಪ್ರೌಢಶಾಲೆಗಳಲ್ಲಿ ಸರ್ಕಾರ ನೇಮಿಸಿಕೊಂಡಿರುವ ಅತಿಥಿ ಶಿಕ್ಷಕರ ಸಂಖ್ಯೆ ಎಷ್ಟು ? (ವರ್ಷವಾರು ವಿವರಗಳನ್ನು ನೀಡುವುದು)